52 ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ)
ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು.

ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೆರೆಗಳಲ್ಲಿ ಹೂಳೆತ್ತುವ ಕಾರ್ಯವನ್ನು ಸರ್ಕಾರ ಕೈಗೊಂಡಿದೆಯೇ;;

ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರದ ವ್ಯಾಪ್ತಿಯಲ್ಲಿ ಮೂರು ಸಣ್ಣ ನೀರಾವರಿ ಕೆರೆಗಳು ಇದ್ದು, ಈ ಕೆರೆಗಳಲ್ಲಿ ಹೂಳೆತ್ತುವ ಕಾರ್ಯವನ್ನು ಕೈಗೊಂಡಿರುವುದಿಲ್ಲ.

ಆ) ಹಾಗಿದ್ದಲ್ಲಿ, ಹೂಳೆತ್ತುವ ಕಾರ್ಯವನ್ನು ಕೈಗೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೆ;

ಇ) ಹಾಗಿದ್ದಲ್ಲಿ, ಯಾವಾಗಿನಿಂದ ಹೂಳೆತ್ತುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು?

ಅನುದಾನದ ಲಭ್ಯತೆಯನ್ನು ಆಧರಿಸಿ ಕ್ರಮ ಕೈಗೊಳ್ಳಲಾಗುವುದು.

313 ಶ್ರೀ ಮಹೇಶ್ ಎಸ್.ಆರ್. (ಕೃಷ್ಣರಾಜನಗರ)
ಕಂದಾಯ ಸಚಿವರು.

ಅ) ಗದ್ದೀಗೌಡರ ವರದಿ ಪ್ರಕಾರ ರಾಜ್ಯದಲ್ಲಿ ಎಷ್ಟು ಹೊಸ ತಾಲ್ಲೂಕುಗಳನ್ನು ರಚಿಸಲಾಗುವುದು(ಜಿಲ್ಲಾವಾರು ವರದಿ ನೀಡುವುದು);

ಗದ್ದೀಗೌಡರ್ ಸಮಿತಿಯು ಒಟ್ಟಾರೆ 30 ಹೊಸ ತಾಲ್ಲೂಕುಗಳ ರಚನೆಗೆ ಶಿಫಾರಸ್ಸು ಮಾಡಿರುತ್ತದೆ. ವಿವರ ಅನುಬಂಧದಲ್ಲಿ ಲಗತ್ತಿಸಿದೆ.

ಆ) ಹೊಸ ತಾಲ್ಲೂಕುಗಳ ರಚನೆಯ ಪ್ರಕ್ರಿಯೆ ಯಾವ ಹಂತದಲ್ಲಿದೆ ಹಾಗೂ ತಾಲ್ಲೂಕುಗಳನ್ನು ರಚಿಸಲು ಇರುವ ಮಾನದಂಡಗಳೇನು;

ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಶ್ರೀ ಎಂ.ಬಿ.ಪ್ರಕಾಶ್ ರವರ ಅಧ್ಯಕ್ಷತೆಯಲ್ಲಿದ್ದ ತಾಲ್ಲೂಕು ಪುನರ್ ರಚನಾ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ಸರ್ಕಾರ ನಿರ್ಣಯ ತೆಗೆದುಕೊಳ್ಳಬೇಕಿದೆ.

ಇ) ಹೊಸ ತಾಲ್ಲೂಕುಗಳ ರಚನೆಯ ಬಗ್ಗೆ ಬಂದಿರುವ ಬೇಡಿಕೆಗಳ ವಿವರ ನೀಡುವುದು;

ರಾಜ್ಯದಲ್ಲಿ ಸುಮಾರು 138 ಹೊಸ ತಾಲ್ಲೂಕುಗಳ ರಚನೆಗಾಗಿ 1635 ಮನವಿಗಳು ಬಂದಿರುತ್ತವೆ.

ಈ) ಎಂ.ಬಿ.ಪ್ರಕಾಶ್ ರವರ ವರದಿಯನ್ವಯ ಹೊಸ ತಾಲ್ಲೂಕುಗಳ ಬಗ್ಗೆ ಪರಿಗಣಿಸಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು?

ವರದಿಯು ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯ ತೆಗೆದು ಕೊಳ್ಳಬೇಕಿದೆ.